# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 06(ಥಣಿಸಂದ್ರ)
## ವಾರ್ಡ್‌ಸಮಿತಿ ಸಭೆ, ದಿನಾಂಕ: 06.03.2021 ರ
## ಸಭಾ ನಡುವಳಿ

ದಿನಾಂಕ: 06.03.2021 ರಂದು ಬೆಳ್ಳಿಗೆ 11.00 ಗಂಟೆಗೆ ವಾರ್ಡ್ ನಂ.06 ಥಣಿಸಂದ್ರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಬಿಬಿಎಂಪಿ ಸಮುದಾಯ ಭವನ, ಹೆಗಡೆನಗರ, 2ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ ಇಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಎಸ್ ಶ್ರೀಧರ್ | ನೋಡಲ್ ಅಧಿಕಾರಿ, ವಾರ್ಡ್ ನಂ. 06(ಥಣಿಸಂದ್ರ) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು ಬ್ಯಾಟರಾಯನಪುರ ಉಪ ವಿಭಾಗ |
| 2 | ಶ್ರೀ ಸುರೇಶ್ ದೇವತ್‌ರಾಜ್ | ಸಹಾಯಕ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿ, ವಾರ್ಡ್ ಸಮಿತಿ, ವಾರ್ಡ್ ನಂ. 06 (ಥಣಿಸಂದ್ರ) |
| 3 | ಶ್ರೀ ಕಿರಣ್.ಬಿ | ಸಹಯಕ ಕಾರ್ಯಪಾಲಕ ಅಭಿಯಂತರರು, ಯೋಜನಾ ವಿಭಾಗ, ಯಲಹಂಕ ವಲಯ, ಬಿಬಿಎಂಪಿ |
| 4 | ವೇಣುಪ್ರಿಯಾ ಎಸ್ | ಸಹಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 5 | ಮುನಿಕೃಷ್ಣಪ್ಪ ಡಿ.ಸಿ | ಎ.ಎಸ್.ಐ ಚಿಕ್ಕಜಾಲ ಸಂಚಾರಿ ಪೋ.ಠಾ |
| 6 | ಶ್ರೀ ವಿ. ಪ್ರೇಮ್ ಕುಮಾರ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 06 |
| 7 | ಶ್ರೀ ಶಶಿಧರ್ | ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 06 |
| 8 | ಶ್ರೀ ಮಂಜುನಾಥ್. ಎಸ್ | ಕಿರಿಯ ಆರೋಗ್ಯ ಪರಿವೀಕ್ಷಕರು, |

ಶ್ರೀ ಸುರೇಶ್ ದೇವತ್‌ರಾಜ್, ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ವಾರ್ಡ್ ಅಭಿಯಂತರರು ವಾರ್ಡ್ ನಂ. 06 ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು, ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. **ಕೋವಿಡ್-19ರ ಸಂಬಂಧ ಮುಜಾಗ್ರತ ಕ್ರಮಗಳ ಬಗ್ಗೆ.** ವಾರ್ಡ್ ಸ.ಅ ರವರು ಮಾತನಾಡಿ ಡಾ॥ ಕೇಶವಪಾಣಿ ರವರು. ವಾರ್ಡ್ ವ್ಯಾಪ್ತಿಯಲ್ಲಿ ಲಸಿಕೆ ನೀಡುವ ಕೆಲಸದಲ್ಲಿ ತೊಡಗಿಸಿಕೊಂಡಿರುವುದರಿಂದ ಸದರಿ ಸಭೆಗೆ ಗೈರುಹಾಜರಾಗಿರುತ್ತಾರೆಂದು ಸಭೆಗೆ ತಿಳಿಸಿದರು. ಹಾಗೂ ಬೆಂಗಳೂರು ನಗರದಲ್ಲಿ ದಿನೇ ದಿನೇ ಸೋಂಕು ಹೆಚ್ಚಾಗುತ್ತಿದ್ದು ಕರೊನಾ 2ನೇ ಅಲೆಯ ಮುನ್ಸೂಚನೆಯಂತೆ ಕಾಣುತ್ತಿದೆ ಆದುದರಿಂದ ಸಾರ್ವಜನಿಕರು ಕಡ್ಡಾಯವಾಗಿ ಸಮಾಜಿಕ ಅಂತರ ಮತ್ತು ಮಾಸ್ಕ್‌ಗಳ ಬಳಕೆಗೆ ಹೆಚ್ಚಿನ ಒತ್ತು ನೀಡುವಂತೆ ವಾರ್ಡ್ ವ್ಯಾಪ್ತಿಯಲ್ಲಿ ಅರಿವು ಮೂಡಿಸಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

2. ದಾಸಪ್ಪ, ಸಂಯುಕ್ತ ಗೆಳೆಯರ ಬಳಗ ಹೆಗಡೆನಗರ: ರವರು ಮಾತನಾಡಿ

1. ಹೆಗಡೆನಗರ ಪಶ್ಚಿಮ ಭಾಗದ ಮುಖ್ಯರಸ್ತೆಯಲ್ಲಿ ವ್ಯಾಪಾರಿಗಳು ಮನ ಬಂದಂತೆ ತಳ್ಳುಗಾಡಿಗಳನ್ನು ನಿಲ್ಲಿಸಿಕೊಂಡು ಪಾದಾಚಾರಿಗಳಿಗೆ ಸಂಚಾರಿಸಲು ತೊಂದರೆಯಾಗುತ್ತಿರುತ್ತದೆ ಇದರ ಬಗ್ಗೆ ಕ್ರಮ ಕೈಗೊಳ್ಳಲು ಕೋರಿದರು.
2. ಬೇಸಿಗೆ ಪ್ರಾರಂಭವಾಗಿದ್ದರಿಂದ ನೀರಿನ ಸಮಸ್ಯೆ ಹೆಚ್ಚಾಗುತ್ತಿದ್ದು, ಕೂಡಲೇ ಕುಡಿಯುವ ನೀರಿನ ಸರಬರಾಜು ಬಗ್ಗೆ ವಿಶೇಷ ಗಮನ ಹರಿಸುವಂತೆ ಕೋರಿದರು.
3. ಸರ್ಕಾರದ ಜನಸೇವಕ ಕಾರ್ಯಕ್ರಮದ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಮುಂದಿನ ಸಭೆಯಲ್ಲಿ ಮಾಹಿತಿ ನೀಡಬೇಕಾಗಿ ಕೋರಿದರು.

3. ಶ್ರೀನಿವಾಸ್‌ರಾವ್ ಅಮರಜ್ಯೋತಿ ಬಡಾವಣೆ ರವರು ಮಾತನಾಡಿ

1. ನಾಗವಾರ ಸಿಗ್ನಲ್‌ನಲ್ಲಿ ಬಹಳ ಅವ್ಯವಸ್ಥೆಯಾಗಿದ್ದು, ಸಾರ್ವಜನಿಕರಿಗೆ ಹಾಗೂ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಪಾದಚಾರಿಗಳಿಗೆ ಓಡಾಡಲು ಅನುಕೂಲವಾಗುಂತೆ ವ್ಯವಸ್ಥೆ ಕಲ್ಪಿಸಲು ಕೋರಿದರು.
2. ವಾರ್ಡ್ ನಂ. 06ಕ್ಕೆ ಸಂಬಂಧಿಸಿದಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಎಸ್.ಟಿ.ಪಿಯ ಮಾಹಿತಿ ನೀಡಲು ಕೋರಿದರು.
3. ವಾರ್ಡ್ ವ್ಯಾಪ್ತಿಯಲ್ಲಿ ಹೊಸದಾಗಿ ನಿರ್ಮಿಸುತ್ತಿರುವ ವಸತಿ ಹಾಗೂ ಇತರೆ ಕಟ್ಟಡಗಳೀಗೆ ಕಡ್ಡಾಯವಾಗಿ ನಕ್ಷೆ ಮಂಜೂರಾತಿ ಪಡೆಯಲು ಕ್ರಮ ವಹಿಸುವಂಥೆ ಕೋರಿದರು.

ಸದರಿ ವಿಷಯಕ್ಕೆ ಸಂಬಂಧಿಸಿದಂತೆ ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡ್ ನಂ. 06ರ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಬಹುತೇಕ ಶೇ. 90% ರಷ್ಟು ರೆವಿನ್ಯೂ ಬಡಾವಣೆಗಳಾಗಿದ್ದು, ಈ ಬಡಾವಣೆಗಳಲ್ಲಿ ಮನೆ ನಿರ್ಮಿಸಲು ನಕ್ಷೆ ಮಂಜೂರಾತಿ ನೀಡಲು ಅವಕಾಶವಿರುವುದಿಲ್ಲ ಹಾಗೂ ಈ ಬಗ್ಗೆ ನಕ್ಷೆ ಮಂಜೂರಾತಿ ಪಡೆಯಲು ಸರ್ಕಾರದ ತೀರ್ಮಾನ ಕೈಗೊಳ್ಳಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

4. ಮರಿಮಾದಯ್ಯ, ಹೆಗಡನಗರ ರವರು ಮಾತನಾಡಿ.

1. ವಾರ್ಡ್ ವ್ಯಾಪ್ತಿಯ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಕವರ್‌ಗಳ ಬಳಕೆ ಹೆಚ್ಚಾಗುತ್ತಿದ್ದು, ಈ ಬಗ್ಗೆ ಕ್ರಮ ವಹಿಸುವಂಥೆ ಕೋರಿದರು.
2. ಹೆಗಡೆನಗರ ಮುಖ್ಯರಸ್ತೆ ಹಾಗೂ ವೃತ್ತದಲ್ಲಿ ವಾಹನಗಳ ಪಾರ್ಕಿಂಗ್‌ಗಾಗಿ ಟ್ರಾಫೀಕ್ ಪೋಲಿಸ್ ರವರು ಸೂಕ್ತ ಕ್ರಮ ವಹಿಸಲು ಕೋರಿದರು.
3. ವಾಣಿಜ್ಯ ಕಟ್ಟಡಗಳಿಂದ ಘನತ್ಯಾಜ್ಯವನ್ನು ಸಂಗ್ರಹಿಸಲು ಹಾಗೂ ವಿಲೇವಾರಿ ಮಾಡಲು ಸೂಕ್ತ ಕ್ರಮ ವಹಿಸುವಂಥೆ ಕೋರಿದರು.

5. ಪ್ರಶಾಂತಿನಗರ ನಿವಾಸಿಗಳು ಮಾತನಾಡಿ, ಪ್ರಶಾಂತಿನಗರ 3ನೆ ಅಡ್ಡರಸ್ತೆಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಿಕೊಡಲು ಕೋರಿದರು

6. ಅಪೂರ್ವ ಬಡಾವಣೆ: ಅಪೂರ್ವ ಬಡಾವಣೆಯಲ್ಲಿ ನೀರಿನ ಸಮಸ್ಯೆ ಇರುವುದರಿಂದ ರೈಲ್ವೆ ಮೆನ್ಸ್ ಬಡಾವಣೆಯಿಂದ ಅಪೂರ್ವ ಬಡಾವಣೆಗೆ ಹೊಸದಾಗಿ ಪೈಪ್‌ಲೈನ್ ಅಳವಡಿಸಲು ಕೋರಿದರು

7. ಟೆಲಿಕಾಂ ಬಡಾವಣೆ ನಿವಾಸಿಗಳು ಮಾತನಾಡಿ 2ನೆ ಮುಖ್ಯರಸ್ತೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದರಿಂದ ನೀರಿನ ಟ್ಯಾಂಕ್ (ಓ.ಹೆಚ್.ಟಿ) ಯಿಂದ ಹೊಸದಾಗಿ ಪೈಪ್‌ಲೈನ್ ಅಳವಡಿಸಿ ಕುಡಿಯುವ ನೀರಿನ ಸರಬರಾಜು ಮಾಡಲು ಕೋರಿದರು.

8. ಅನಾಮ್ ಎನ್‌ಕ್ಲೇವ್ ಬಡಾವಣೆ ನಿವಾಸಿಗಳು ಮಾತನಾಡಿ:

1. ಅನಾಮ್ ಎನ್‌ಕ್ಲೇವ್ ಬಡಾವಣೆಯಲ್ಲಿ ಕಸದ ಸಂಗ್ರಹಣೆ ಸರಿಯಾಗಿ ಮಾಡುತ್ತಿರುವುದಿಲ್ಲ ಈ ಬಗ್ಗೆ ಕ್ರಮ ವಹಿಸುವಂತೆ ಕೋರಿದರು.
2. ಸದರಿ ಬಡಾವಣೆಯ ರಸ್ತೆ ಮತ್ತು ಚರಂಡಿಗಳಲ್ಲಿ ಶೇಖರಣೆಯಾಗಿರುವ ಹೂಳು ತೆಗೆದು ಚರಂಡಿಗಳನ್ನು ಸ್ವಚ್ಛಗೊಳಿಸಲು ಕೋರಿದರು.

3. ಕುಡಿಯುವ ನೀರಿನ ಸರಬರಾಜುಗಾಗಿ ಹೊಸದಾಗಿ ಇನ್ನೊಂದು ಕೊಳವೆ ಬಾವಿಯನ್ನು ಕೊರೆದು ನೀರಿನ ವ್ಯವಸ್ಥೆ ಕಲ್ಪಿಸಲು ಕೋರಿದರು.
4. ಸದರಿ ಬಡಾವಣೆಯಲ್ಲಿ ವಿದ್ಯುತ್ ಸಮಸ್ಯೆ ಇರುವುದರಿಂದ ಈ ಬಗ್ಗೆ ಬೆಸ್ಕಾಂ ಇಲಾಖೆ ರವರು ಸೂಕ್ತ ಕ್ರಮ ವಹಿಸುವಂತೆ ಕೋರಿದರು.
5. ಸದರಿ ಬಡಾವಣೆಯಲ್ಲಿ ಅಡ್ಡರಸ್ತೆಗಳಿಗೆ ಅಡಿಗಾಲುವೆಗಳನ್ನು ನಿರ್ಮಿಸುವ ಅವಶ್ಯಕತೆ ಇದ್ದು, ಕ್ರಮ ವಹಿಸುವಂತೆ ಕೋರಿದರು.

9. ವಾರ್ಡ್ ಅಭಿಯಂತರರು ಮಾತನಾಡಿ ಸಾರ್ವಜನಿಕರಿಂದ ರಸ್ತೆ ಮತ್ತು ಚರಂಡಿಗಳ ನಿರ್ವಹಣೆ ಬಗ್ಗೆ ಪ್ರತಿ ದಿನ ಬಹಳಷ್ಟು ದೂರುಗಳೂ ನೇರವಾಗಿ ಹಾಗೂ ಬಿಬಿಎಂಪಿ ಸಹಾಯ 2.0 ಯಿಂದ ಬರುತ್ತಿದ್ದು, ಸಿಲ್ಟ್ ಅಂಡ್ ಟ್ರಾಕ್ಟರ್‌ಗೆ ಈ ಹಿಂದೆ ನೀಡಿರುವ ಕಾರ್ಯದೇಶದ ಅವಧಿಯು 31.12.2020ಕ್ಕೆ ಮುಕ್ತಾಯಗೊಂಡಿದ್ದು, ಪ್ರಸ್ತುತ ಯಾವುದೇ ಕೂಲಿ ಆಳುಗಳೂ, ಟ್ರಾಕ್ಟರ್ ಇಲ್ಲದೇ ಇರುವುದರಿಂದ ಸಾರ್ವಜನಿಕರಿಂದ ಬರುವ ದೂರುಗಳನ್ನು ಸರಿಪಡಿಸಲು ಸಾಧ್ಯವಾಗುತ್ತಿರುವುದಿಲ್ಲವೆಂದು ತಿಳಿಸಿದರು. ಹಾಗೂ ಟ್ಯಾಂಕರ್ ಮುಖಾಂತರ ಕುಡಿಯುವ ನೀರಿನ ಸರಬರಾಜು ಮಾಡುವ ಕಾಮಗಾರಿಯ ಕಾರ್ಯದೇಶದ ಅವಧಿಯು ಸಹ ಮುಕ್ತಾಯಗೊಂಡಿದ್ದು, ನೀರಿನ ಅಭಾವವಿರುವ ಕಡೆಗಳಲ್ಲಿ ನೀರಿನ ಸರಬರಾಜು ಮಾಡುವ ಕಾಮಗಾರಿಯನ್ನು ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ ಎಂದು ತಿಳಿಸಿದರು. ಹಾಗೂ 2020-21ನೇ ಸಾಲಿನ ರಸ್ತೆ ನಿರ್ವಹಣೆಗಾಗಿ ಹಾಗೂ ಟ್ಯಾಂಕರ್ ಮುಖಾಂತರ ಕು.ನೀ ಸರಬರಾಜು ಮಾಡುವ ಕಾಮಗಾರಿಗೆ ಕೇಂದ್ರ ಕಚೇರಿಯಿಂದ ಇಲ್ಲಿಯವರೆಗೆ ಯಾವುದೇ ಅನುಮತಿ ನೀಡಿರುವುದಿಲ್ಲವೆಂದು ಹಾಗೂ ಡಿ.ಸಿ ಬಿಲ್ ಮುಖಾಂತರ ಕಾರ್ಯನಿರ್ವಹಿಸಿ ವೆಚ್ಚ ಭರಿಸಲು ಮೇಲಾಧಿಕಾರಿಗಳಿಗೆ ಕೋರಲಾಗಿದ್ದು, ಯಾವುದೇ ಅನುಮತಿ ನೀಡಿರುವುದಿಲ್ಲವೆಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಎಲ್ಲಾ ದೂರು ಸಲಹೆ ಮತ್ತು ಸೂಚನೆಗಳನ್ನು ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸಭೆಯಲ್ಲಿ ಹಾಜರಿದ್ದ ಎಲ್ಲಾ ಇಲಾಖಾ ಅಧಿಕಾರಿಗಳಿಗೆ ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

06/03/2021

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 06(ಥಣಿಸಂದ್ರ)

6/3/2021

ನೋಡೆಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 06, (ಥಣಿಸಂದ್ರ)

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಿಸಿದೆ
6. ಕಛೇರಿ ಕಡತಕ್ಕೆ.